# Akashvani : Bangalore
# National Bulletin In Kannada
# 07.07.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.07.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಒಡಿಶಾ ಪ್ರವಾಸ; ಪುರಿಯಲ್ಲಿಂದು ಭಗವಾನ್ ಜಗನ್ನಾಥ ಸೇರಿದಂತೆ ಐತಿಹಾಸಿಕ ರಥಯಾತ್ರೆಯಲ್ಲಿ ಭಾಗಿ

೨. ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ರಷ್ಯಾ- ಆಸ್ಟ್ರಿಯ ಪ್ರವಾಸ; ಹಲವು ನಾಯಕರೊಂದಿಗೆ ದ್ವಿಪಕ್ಷೀಯ ಮಾತುಕತೆ

೩. ಸಹಕಾರಿ ಬ್ಯಾಂಕ್‌ಗಳ ಜಾಲದ ಬಲವರ್ಧನೆ; ೨ ಲಕ್ಷ ಗ್ರಾಮಪಂಚಾಯಿತಿಗಳಲ್ಲಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಗಳ ಸ್ಥಾಪನೆ- ಅಮಿತ್ ಶಾ

೪. ಮ್ಯಾಡ್ರೀಡ್‌ನಲ್ಲಿ ಸ್ಪೇನ್ ಗ್ರ್ಯಾಂಡ್ ಪ್ರಿಕ್ಸ್ ಕೂಟ; ಮಹಿಳೆಯರ ೫೦ ಕೆಜಿ ಕುಸ್ತಿಯಲ್ಲಿ ವಿನೇಶ್ ಪೊಗತ್‌ಗೆ ಚಿನ್ನ

೫. ಯುರೋ ಕಪ್ ಫುಟ್ಬಾಲ್; ಇಂಗ್ಲೆಂಡ್-ನೆದರ್‌ಲ್ಯಾಂಡ್ಸ್ ಸೆಮಿಫೈನಲ್ಸ್ ಪ್ರವೇಶ

**<><*<><>*><>**

ಒಡಿಶಾಗೆ ನಾಲ್ಕು ದಿನಗಳ ಪ್ರವಾಸ ಕೈಗೊಂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಇಂದು ಎರಡನೇ ದಿನದ ಕಾರ್ಯಕ್ರಮದಲ್ಲಿ ಕರಾವಳಿಯ ಪವಿತ್ರ ನಗರವಾದ ಪುರಿಯಲ್ಲಿ ಭಗವಾನ್ ಜಗನ್ನಾಥ, ಭಗವಾನ್ ಬಲಭದ್ರ, ದೇವಿ ಸುಭದ್ರ ಮತ್ತು ಭಗವಾನ್ ಸುದರ್ಶನರ ವಿಶ್ವಪ್ರಸಿದ್ಧ ರಥಯಾತ್ರೆಗೆ ಸಾಕ್ಷಿಯಾಗಲಿದ್ದಾರೆ. ಭುವನೇಶ್ವರದ ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿನ್ನೆ ಸಂಜೆ ಬಂದಿಳಿದ ರಾಷ್ಟ್ರಪತಿ ಅವರನ್ನು ಒಡಿಶಾ ರಾಜ್ಯಪಾಲ ರಘುವರ್ ದಾಸ್, ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಮತ್ತು ಇನ್ನಿತರೆ ಪ್ರತಿನಿಧಿಗಳು ಸ್ವಾಗತಿಸಿದರು. ಬಳಿಕ ದ್ರೌಪದಿ ಮುರ್ಮು ಅವರು, ಭುವನೇಶ್ವರದಲ್ಲಿ ಉತ್ಕಲಮಣಿ ಪಂಡಿತ್ ಗೋಪಬಂಧು ದಾಸ್ ಅವರ ೯೬ನೇ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಉದ್ಘಾಟಿಸಿದರು. ರಾಷ್ಟ್ರಪತಿ ಅವರು ನಾಳೆ ಭುವನೇಶ್ವರದಲ್ಲಿರುವ ಐತಿಹಾಸಿಕ ಉದಯಗಿರಿ ಮತ್ತು ಖಂಡಗಿರಿ ಗುಹೆಗಳಿಗೆ ಭೇಟಿ ನೀಡಲಿದ್ದಾರೆ. ಅಲ್ಲದೆ, ಬಿಭೂತಿ ಕನುಂಗೋ ಕಾಲೇಜ್ ಆಫ್ ಆರ್ಟ್ ಅಂಡ್ ಕ್ರಾಫ್ಟ್ಸ್ ಹಾಗೂ ಉತ್ಕಲ್ ಸಂಸ್ಕೃತಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಭುವನೇಶ್ವರ ಸಮೀಪದ ಹರಿದಮಾಡ ಗ್ರಾಮದಲ್ಲಿ ಬ್ರಹ್ಮಕುಮಾರಿ ಡಿವೈನ್ ರಿಟ್ರೀಟ್ ಸೆಂಟರ್ ಅನ್ನು ಸಹ ಉದ್ಘಾಟಿಸಲಿರುವ ರಾಷ್ಟ್ರಪತಿ, ಅದೇ ದಿನ ಸುಸ್ಥಿರತೆಗಾಗಿ ಜೀವನಶೈಲಿ" ಅಭಿಯಾನವನ್ನೂ ಪ್ರಾರಂಭಿಸಲಿದ್ದಾರೆ. ನಾಡಿದ್ದು ಮಂಗಳವಾರ ಅವರು, ಭುವನೇಶ್ವರದಲ್ಲಿರುವ ರಾಷ್ಟ್ರೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ೧೩ನೇ ಪದವಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡ ಬಳಿಕ ದೆಹಲಿಗೆ ಹಿಂದಿರುಗಲಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ, ನಾಳೆಯಿಂದ ರಷ್ಯಾ ಮತ್ತು ಆಸ್ಟ್ರಿಯಾ ದೇಶಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಮಾಸ್ಕೊದಲ್ಲಿ ೨೨ನೇ ಭಾರತ-ರಷ್ಯಾ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿರುವ ಪ್ರಧಾನಿ ಅವರು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೂ ಮಾತುಕತೆ ನಡೆಸಲಿದ್ದಾರೆ. ಬಳಿಕ ನರೇಂದ್ರ ಮೋದಿ ಪ್ರವಾಸದ ಎರಡನೇ ಚರಣದಲ್ಲಿ ಆಸ್ಟ್ರಿಯಾಗೆ ಭೇಟಿ ನೀಡಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ವಿಯೆನ್ನಾ ಭೇಟಿಯು ವಿಶೇಷ ಗೌರವ" ಎಂದು ಹೇಳಿರುವ ಆಸ್ಟ್ರಿಯಾದ ಚಾನ್ಸಲರ್ ಕಾರ್ಲ್ ನೆಹಮ್ಮರ್, ಪ್ರಧಾನಿ ಅವರ ಈ ಪ್ರವಾಸವನ್ನು ತಾವು ಕುತೂಹಲದಿಂದ ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೯ ರಂದು ಮಾಸ್ಕೋದಿಂದ ತಮ್ಮ ಎರಡು ರಾಷ್ಟ್ರಗಳ ಪ್ರವಾಸದ ಎರಡನೇ ಚರಣದಲ್ಲಿ ಆಸ್ಟ್ರಿಯಾಕ್ಕೆ ಆಗಮಿಸಲಿದ್ದಾರೆ. ೪೧ ವರ್ಷಗಳ ಬಳಿಕ ಭಾರತದ ಪ್ರಧಾನಿಯೊಬ್ಬರು ಆಸ್ಟ್ರಿಯಾಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲು. ವಿಯೆನ್ನಾದಲ್ಲಿ ತಂಗಲಿರುವ ಪ್ರಧಾನಿ ಅವರು, ಆಸ್ಟ್ರಿಯಾದ ಅಧ್ಯಕ್ಷ ಅಲೆಕ್ಸಾಂಡರ್ ವ್ಯಾನ್ ಡೆರ್ ಬೆಲ್ಲೆನ್ ಹಾಗೂ ಚಾನ್ಸಲರ್ ಕಾಲ್ ನೆಹಮ್ಮರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ಅಲ್ಲದೆ, ಉಭಯ ದೇಶಗಳ ನಾಯಕರು ಭಾರತ ಮತ್ತು ಆಸ್ಟ್ರಿಯಾದ ಉದ್ಯಮಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಪ್ರಧಾನಿ ಅವರು ತಮ್ಮ ಭೇಟಿಯ ವೇಳೆ ವಿಯೆನ್ನಾದಲ್ಲಿರುವ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ.

**<><*<><>*><>**

ಗುಜರಾತ್ ಗೆ ಎರಡು ದಿನಗಳ ಪ್ರವಾಸದಲ್ಲಿರುವ ಕೇಂದ್ರ ಗೃಹ ಹಾಗೂ ಸಹಕಾರ ಖಾತೆ ಸಚಿವ ಅಮಿತ್ ಶಾ, ರಥಯಾತ್ರೆಯ ಸಂದರ್ಭದಲ್ಲಿ ಇಂದು ಜಗನ್ನಾಥ ದೇವಾಲಯದಲ್ಲಿ ಮಂಗಳ ಆರತಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಸಚಿವರು, ಅಹಮದಾಬಾದ್‌ನ ನಾರನ್‌ಪುರಾದಲ್ಲಿ ಎಸ್ ಎಲ್ ಐ ಎಂ ಎಸ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ಮತ್ತು ಅಂಬಾವಾಡಿಯಲ್ಲಿ ವಿದ್ಯಾರ್ಥಿ ಭವನಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

**<><*<><>*><>**

ಮುಂದಿನ ಐದು ವರ್ಷಗಳಲ್ಲಿ ಸುಮಾರು ೨ ಲಕ್ಷ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧೋದ್ದೇಶಿತ ಪ್ರಾಥಮಿಕ ಕೃಷಿ ಪತ್ತಿನ ಸಂಘಗಳನ್ನು ಸ್ಥಾಪಿಸಲಾಗುವುದು ಎಂದು ಕೇಂದ್ರ ಗೃಹ ಮತ್ತು ಸಹಕಾರ ಖಾತೆ ಸಚಿವ ಅಮಿತ್ ಶಾ ಹೇಳಿದ್ದಾರೆ. ಗುಜರಾತ್‌ನ ಗಾಂಧಿ ನಗರದಲ್ಲಿ ನಿನ್ನೆ ೧೦೨ನೇ ಅಂತಾರಾಷ್ಟ್ರೀಯ ಸಹಕಾರ ದಿನದ ಅಂಗವಾಗಿ ಆಯೋಜಿಸಿದ್ದ ಸಹಕಾರದಿಂದ ಸಮೃದ್ಧಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇದುವರೆಗೆ ಸಹಕಾರ ಜಾಲಕ್ಕೆ ಒಳಪಡದ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧೋದ್ದೇಶಿತ ಪ್ರಾಥಮಿಕ ಕೃಷಿ ಪತ್ತಿನ ಸಂಘ- ಪಿಎಸಿಎಸ್ ಗಳನ್ನು ಆದ್ಯತೆ ಮೇಲೆ ಸ್ಥಾಪಿಸಲಾಗುವುದು ಎಂದು ಹೇಳಿದರು. ಸಹಕಾರಿ ಬ್ಯಾಂಕ್‌ಗಳ ಜಾಲವನ್ನು ಬಲಪಡಿಸಲು ಎಲ್ಲ ಜಿಲ್ಲಾ ಮತ್ತು ರಾಜ್ಯ ಸಹಕಾರಿ ಸಂಘಗಳು ಸಹಕಾರಿ ಬ್ಯಾಂಕ್‌ಗಳ ಮೂಲಕವೇ ತಮ್ಮ ಹಣಕಾಸು ವಹಿವಾಟು ನಡೆಸಬೇಕು ಎಂದು ಅಮಿತ್ ಶಾ ಆಗ್ರಹಿಸಿದರು. ಸಹಕಾರಿ ಕ್ಷೇತ್ರವನ್ನು ಸಶಕ್ತಗೊಳಿಸಲು ಕೇಂದ್ರ ಸರ್ಕಾರ ಕೈಗೊಂಡಿರುವ ವಿವಿಧ ಉಪಕ್ರಮಗಳನ್ನು ವಿವರಿಸಿದ ಅಮಿತ್ ಶಾ, ಸಹಕಾರಿ ಕಾರ್ಯಜಾಲವನ್ನು ವಿಸ್ತರಣೆ ಮಾಡುವ ಮೂಲಕ ಈ ಸಂಘಟನೆಗಳನ್ನು ಲಾಭದಾಯಕವನ್ನಾಗಿ ಮಾಡಲು ಸಾಧ್ಯ ಎಂದು ಹೇಳಿದರು. ಈ ಸಂದರ್ಭದಲ್ಲಿ ಅಮಿತ್ ಶಾ, ರಾಷ್ಟ್ರೀಯ ಸಹಕಾರಿ ಸಾವಯವ ಕಂಪನಿಯ ಭಾರತ್ ಸಾವಯವ ಅಟ್ಟಾ ಯೋಜನೆ ಹಾಗೂ ನ್ಯಾನೊ ಯೂರಿಯಾ ಖರೀದಿ ಕುರಿತಂತೆ ಗುಜರಾತ್ ಸರ್ಕಾರ, ರೈತರಿಗಾಗಿ ಜಾರಿಗೆ ತಂದಿರುವ ವಿಶೇಷ ನೆರವು ಯೋಜನೆಗೆ ಚಾಲನೆ ನೀಡಿದರು. ಇದಲ್ಲದೆ, ಅಮೂಲ್‌ನ ದೆಹಲಿಯ ಮೊದಲ ಸಾವಯವ ಅಂಗಡಿಯನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಕೇಂದ್ರ ಸಹಕಾರ ಖಾತೆ

ರಾಜ್ಯ ಸಚಿವ ಮುರುಳೀಧರ ಮೋಹೊಲ್, ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಪಾಲ್ಗೊಂಡಿದ್ದರು.

**<><*<><>*><>**

೨೦೨೪ ನೇ ವರ್ಷಕ್ಕಾಗಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ - ನೀಟ್ ಯುಜಿ ಮತ್ತು ಪಿಜಿ ಕೋರ್ಸ್‌ಗಳಿಗಾಗಿ ವೈದ್ಯಕೀಯ ಸಮಾಲೋಚನಾ ಸಮಿತಿ-ಎಂಸಿಸಿ ಯಾವುದೇ ವೇಳಾಪಟ್ಟಿಯನ್ನು ಇನ್ನೂ ಸೂಚಿಸಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗ - ಎನ್‌ಎಂಸಿ, ಪರೀಕ್ಷೆ ಪ್ರಕ್ರಿಯೆಯನ್ನು ಮತ್ತು ಸೀಟ್ ಮ್ಯಾಟ್ರಿಕ್ಸ್ ಅನ್ನು ಪೂರ್ಣಗೊಳಿಸಿದ ನಂತರ ಜಾಲತಾಣದಲ್ಲಿ ನೀಟ್ ಯುಜಿ ಮತ್ತು ಪಿಜಿ ಕೌನ್ಸೆಲಿಂಗ್ ವೇಳಾಪಟ್ಟಿಯನ್ನು ಎಂಸಿಸಿ ಪ್ರಕಟಿಸುತ್ತದೆ ಎಂದು ವೈದ್ಯಕೀಯ ಸಚಿವಾಲಯ ಹೇಳಿದೆ. ೨೦೨೪ ಕ್ಕೆ, ಜೂನ್‌ನ ಕೊನೆಯ ವಾರದಲ್ಲಿ ಯುಜಿ ಮತ್ತು ಪಿಜಿ ಸೀಟ್‌ಗಳಿಗೆ ಸೀಟ್ ಮ್ಯಾಟ್ರಿಕ್ಸ್‌ನ ಅಂತಿಮಗೊಳಿಸುವಿಕೆಗಾಗಿ ಎನ್‌ಎಂಸಿ, ತನ್ನ ವೇಳಾಪಟ್ಟಿಯನ್ನು ತಿಳಿಸಿದ್ದು, ಜುಲೈ ಮೂರನೇ ವಾರದಲ್ಲಿ ಯುಜಿ ಸೀಟ್ ಮ್ಯಾಟ್ರಿಕ್ಸ್ ಮತ್ತು ಆಗಸ್ಟ್ ಮಧ್ಯದಲ್ಲಿ ಪಿಜಿ ಸೀಟ್ ಮ್ಯಾಟ್ರಿಕ್ಸ್ ಅನ್ನು ಅಂತಿಮಗೊಳಿಸುತ್ತದೆ ಎಂದು ಸೂಚಿಸುತ್ತದೆ. ವೈದ್ಯಕೀಯ ಕೌನ್ಸೆಲಿಂಗ್ ಸಮಿತಿಯು ಕೌನ್ಸೆಲಿಂಗ್ ವೇಳಾಪಟ್ಟಿಯನ್ನು ತಿಳಿಸಲಿದೆ ಎಂದು ಸಚಿವಾಲಯ ಹೇಳಿದೆ.

**<><*<><>*><>**

ಭಾರತೀಯ ಹವಾಮಾನ ಇಲಾಖೆ ಉತ್ತರಾಖಂಡ್ ನಲ್ಲಿ ಭಾರೀ ಮಳೆಯ ಎಚ್ಚರಿಕೆ ನೀಡಿರುವ ಹಿನ್ನೆಲೆಯಲ್ಲಿ ಚಾರ್ ಧಾಮ್ ಯಾತ್ರೆಯನ್ನು ರದ್ದುಪಡಿಸಲಾಗಿದೆ. ಈ ಸಂಬಂಧ ಗಡ್ವಾಲ್ ವಿಭಾಗೀಯ ಆಯುಕ್ತ ವಿನಯ್ ಶಂಕರ್ ಪಾಂಡೆ ಆದೇಶ ಜಾರಿಗೊಳಿಸಿದ್ದಾರೆ. ಯಾತ್ರಾರ್ಥಿಗಳು ದೇವಸ್ಥಾನಕ್ಕೆ ಮುಂದೆ ಸಾಗದೆ, ಸದ್ಯ ಇರುವ ಜಾಗದಲ್ಲೇ ಸುರಕ್ಷಿತವಾಗಿರಬೇಕು ಎಂದು ಅವರು ಮನವಿ ಮಾಡಿದ್ದಾರೆ. ವಿವಿಧ ಮಾರ್ಗಗಳಲ್ಲಿ ಭಾರೀ ಮಳೆ ಹಾಗೂ ಭೂಕುಸಿತ ಕುರಿತ ಹವಾಮಾನ ಇಲಾಖೆಯ ಮುನ್ನೆಚ್ಚರಿಕೆ ಹಿನ್ನೆಲೆಯಲ್ಲಿ ಋಷಿಕೇಶ್ ಗಿಂತ ಮುಂದೆ ಪ್ರಯಾಣಿಸಬಾರದೆಂದು ಸೂಚಿಸಿದ್ದಾರೆ.

**<><*<><>*><>**

ಅಸ್ಸಾಂನಲ್ಲಿ ಪ್ರವಾಹದಿಂದಾಗಿ ಕಳೆದ ೨೪ ಗಂಟೆಗಳಲ್ಲಿ ಆರು ಮಂದಿ ಮೃತಪಟ್ಟಿದ್ದು, ಮೃತರ ಸಂಖ್ಯೆ ೫೮ ಕ್ಕೇರಿದೆ. ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿಯಲ್ಲಿ ಯಾವುದೇ ಬದಲಾವಣೆಯಿಲ್ಲ. ೨೯ ಜಿಲ್ಲೆಗಳಲ್ಲಿನ ಸುಮಾರು ೨೪ ಲಕ್ಷ ಮಂದಿ ಇನ್ನೂ ಪ್ರವಾಹದಿಂದ ಸಂಕಷ್ಟಕ್ಕೀಡಾಗಿದ್ದಾರೆ. ಪ್ರವಾಹದಿಂದಾಗಿ ೩ ಸಾವಿರದ ೫೦೦ ಗ್ರಾಮಗಳು ಬಾಧಿತವಾಗಿದ್ದು, ಸುಮಾರು ೬೮ ಸಾವಿರ ಹೆಕ್ಟೇರ್ ನಲ್ಲಿ ಬೆಳೆದಿದ್ದ ಬೆಳೆ ಹಾನಿಯಾಗಿದೆ. ಕಳೆದ ೨೪ ಗಂಟೆಗಳಲ್ಲಿ ಎನ್ ಡಿ ಆರ್ ಎಫ್ ಮತ್ತು ಎಸ್,ಡಿ,ಆರ್ ಎಫ್ ಪಡೆಗಳು ೨೧೮ ಮಂದಿಯನ್ನು ರಕ್ಷಿಸಿವೆ. ಬ್ರಹ್ಮಪುತ್ರಾ, ಬರಾಕ್ ಮತ್ತು ಅದರ ಉಪನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಪ್ರವಾಹದಿಂದಾಗಿ ನಿನ್ನೆ ಒಂದೇ ದಿನ ೧೭೬ ರಸ್ತೆಗಳು ಮತ್ತು ೨ ಸೇತುವೆಗಳು ಹಾಗೂ ಹಲವು ಮೂಲಸೌಕರ್ಯಗಳಿಗೆ ಹಾನಿಯಾಗಿದೆ. ೧೫ ಲಕ್ಷಕ್ಕೂ ಹೆಚ್ಚು ಪ್ರಾಣಿಗಳು ಕೂಡಾ ಬಾಧಿತವಾಗಿವೆ. ರಾಜ್ಯ ಸರ್ಕಾರ, ೨೯೩ ಪರಿಹಾರ ಶಿಬಿರಗಳನ್ನು ಮತ್ತು ೨೮೪ ಪುನರ್ವಸತಿ ವಿತರಣಾ ಕೇಂದ್ರಗಳನ್ನು ತೆರೆದಿದೆ. ಏತನ್ಮಧ್ಯೆ ಭಾರತೀಯ ಹವಾಮಾನ ಇಲಾಖೆ, ಪ್ರವಾಹ ಪೀಡಿತ ಅಸ್ಸಾಂ ರಾಜ್ಯದಲ್ಲಿ ಭಾರೀ ಮಳೆಯ ಮುನ್ಸೂಚನೆ ನೀಡಿದೆ.

**<><*<><>*><>**

ಮ್ಯಾಡ್ರಿಡ್‌ನಲ್ಲಿ ನಿನ್ನೆ ಸ್ಪೇನ್ ಗ್ರ್ಯಾಂಡ್ ಪ್ರಿಕ್ಸ್ ಕೂಟದಲ್ಲಿ ನಡೆದ ಮಹಿಳೆಯರ ೫೦ ಕೆಜಿ ವಿಭಾಗದ ಕುಸ್ತಿ ಸ್ಪರ್ಧೆಯಲ್ಲಿ ಭಾರತದ ವಿನೇಶ್ ಪೊಗತ್ ಚಿನ್ನದ ಪದಕ ಗೆದ್ದುಕೊಂಡರು. ಎರಡು ಬಾರಿಯ ವಿಶ್ವ ಚಾಂಪಿಯನ್‌ಶಿಪ್ ಕಂಚಿನ ಪದಕ ವಿಜೇತೆ ವಿನೇಶ್ ಪೊಗತ್, ಫೈನಲ್‌ನಲ್ಲಿ ರಷ್ಯಾದ ಮಾರಿಯಾ ಟ್ಯುಮೆರಕೊವಾ ಅವರನ್ನು ೧೦-೫ ಅಂಕಗಳಿಂದ ಪರಾಭವಗೊಳಿಸಿ ಈ ಸಾಧನೆ ಮಾಡಿದರು.

<><*<><>*><>

ಜರ್ಮನಿಯಲ್ಲಿ ನಡೆಯುತ್ತಿರುವ ಯೂರೋ ಕಪ್ ಫುಟ್ಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಇಂಗ್ಲೆಂಡ್ ಮತ್ತು ನೆದರ್‌ಲ್ಯಾಂಡ್ಸ್ ತಂಡಗಳು ಸೆಮಿಫೈನಲ್ಸ್ ಪ್ರವೇಶಿಸಿವೆ. ತಡರಾತ್ರಿ ನಡೆದ ಕ್ವಾರ್ಟರ್‌ಫೈನಲ್ಸ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಪೆನಾಲ್ಟಿ ಅವಕಾಶದಲ್ಲಿ ಸ್ವಿಟ್ಜರ್‌ಲ್ಯಾಂಡ್ ತಂಡವನ್ನು ೫-೩ ಗೋಲುಗಳಿಂದ ಮಣಿಸಿ ಅಂತಿಮ ನಾಲ್ಕರಘಟ್ಟಕ್ಕೆ ಅರ್ಹತೆ ಪಡೆಯಿತು. ನಿಗದಿತ ಅವಧಿಯಲ್ಲಿ ಎರಡೂ ತಂಡಗಳು ೧-೧ ಗೋಲಿನಿಂದ ಸಮಗೌರವ ಸಾಧಿಸಿದ್ದವು. ನಂತರ ನಡೆದ ಮತ್ತೊಂದು ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ನೆದರ್‌ಲ್ಯಾಂಡ್ಸ್ ತಂಡ ೨-೧ ಗೋಲುಗಳಿಂದ ಟರ್ಕಿ ತಂಡದ ವಿರುದ್ಧ ಜಯಗಳಿಸಿ ಸೆಮಿಫೈನಲ್ಸ್‌ಗೆ ಪ್ರವೇಶ ಪಡೆಯಿತು. ಬರುವ ಬುಧವಾರ ನಡೆಯಲಿರುವ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಸ್ಪೇನ್ ಮತ್ತು ಫ್ರಾನ್ಸ್ ಹಾಗೂ ಗುರುವಾರ ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ಮತ್ತು ನೆದರ್‌ಲ್ಯಾಂಡ್ಸ್ ತಂಡಗಳು ಮುಖಾಮುಖಿಯಾಗಲಿವೆ.

<><*<><>*><>

ಹರಾರೆಯಲ್ಲಿ ನಿನ್ನೆ ರಾತ್ರಿ ನಡೆದ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಆತಿಥೇಯ ಜಿಂಬಾಬ್ವೆ ತಂಡ ೧೩ ರನ್‌ಗಳಿಂದ ಭಾರತ ತಂಡದ ವಿರುದ್ಧ ಜಯಗಳಿಸಿದೆ. ಈ ಗೆಲುವಿನೊಂದಿಗೆ ಜಿಂಬಾಬ್ವೆ, ಐದು ಪಂದ್ಯಗಳ ಟಿ-೨೦ ಸರಣಿಯಲ್ಲಿ೧-೦ ಮುನ್ನಡೆಯೊಂದಿಗೆ ಶುಭಾರಂಭ ಮಾಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>